# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1144 (1388) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸುವ ದಿನಾಂಕ | : | 18.03.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ವಿಷಯ | ಉತ್ತರ |
|---|---|---|
| ಅ) | ಸಮಾಜಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; | ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳಲ್ಲಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಿವರ ಕೆಳಕಂಡಂತಿದೆ. |

| ಇಲಾಖೆ | ಶಾಲೆಗಳ ಸಂಖ್ಯೆ | ಬೋಧಕ | ಬೋಧಕೇತರ |
|---|---|---|---|
| ಸಮಾಜ ಕಲ್ಯಾಣ ಇಲಾಖೆ | 68 | 209 | 275 |
| ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ | 119 | 350 | 361 |
| ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ | 824 | 5044 | 9617 |

| ಕ್ರ. ಸಂ | ವಿಷಯ | ಉತ್ತರ |
|---|---|---|
| ಆ) | ಸದರಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ 2406 ಅತಿಥಿ ಶಿಕ್ಷಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| ಇ) | ಅತಿಥಿ ಶಿಕ್ಷಕರಿಗೆ ಮಾಸಿಕ ನೀಡಲಾಗುತ್ತಿರುವ ಗೌರವಧನವೆಷ್ಟು; ಗೌರವಧನ ನೀಡುವಲ್ಲಿ ಅನುಸರಿಸುತ್ತಿರುವ ಮಾನದಂಡಗಳೇನು; | ಸಂಘದ ಅಧೀನದ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರುಗಳಿಗೆ ಶಿಕ್ಷಣ ಇಲಾಖೆಯಲ್ಲಿ ಪಾವತಿಸುತ್ತಿರುವ ಮಾಸಿಕ ಗೌರವಾಧನ ಆಧಾರದ ಮೇಲೆ ರೂ.10,000/- ಪಾವತಿಸಲಾಗುತ್ತಿದೆ. |
| ಈ) | ಗೌರವಧನವನ್ನು ಪರಿಷ್ಕರಿಸಲು ಚಿಂತಿಸಲಾಗಿದೆಯೇ; | ಇಲ್ಲ |

| | | |
|---|---|---|
| ಉ) | ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು? | ಸಮಾಜ ಕಲ್ಯಾಣ ಇಲಾಖೆಯ 68 ವಸತಿ ಶಾಲೆಗಳಲ್ಲಿ ಖಾಲಿ ಇರುವ 209 ಶಿಕ್ಷಕರ (ಬೋಧಕರ) ಹುದ್ದೆಗಳ ಪೈಕಿ 123 ಹುದ್ದೆಗಳನ್ನು ಭರ್ತಿ ಮಾಡಲು ತಾತ್ಕಾಲಿಕ ಆಯ್ಕೆ ಪಟ್ಟಿಯು ಕರ್ನಾಟಕ ಲೋಕಸೇವಾ ಆಯೋಗದಿಂದ ಪ್ರಕಟಗೊಂಡಿರುತ್ತದೆ. ಅಂತಿಮ ಆಯ್ಕೆ ಪಟ್ಟಿ ಸ್ವೀಕೃತಗೊಂಡ ತಕ್ಷಣ ನೇಮಕಾತಿ ಆದೇಶ ನೀಡಲಾಗುವುದು.<br><br>ಬೋಧಕೇತರ ಹುದ್ದೆಗಳಲ್ಲಿ ಖಾಲಿ ಇರುವ ಅಡುಗೆಯವರ ಹುದ್ದೆಗಳನ್ನು ಜಿಲ್ಲಾ ಹಂತದಲ್ಲಿ ಅಡುಗೆ ಸಹಾಯಕರಿಗೆ ಪದೋನ್ನತಿ ನೀಡುವ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ. ಉಳಿದಂತೆ ನೇರ ನೇಮಕಾತಿ ಮೂಲಕ ಅಡುಗೆ ಸಹಾಯಕರು ಮತ್ತು ಕಾವಲುಗಾರರ ಹುದ್ದೆಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯ ಮೂಲಕ ಭರ್ತಿ ಮಾಡಲಾಗುತ್ತಿದೆ.<br><br>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಮೂಲಕ ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ. ಅದರನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ. ಬೋಧಕೇತರ ಹುದ್ದೆಗಳಲ್ಲಿ ನೇರ ನೇಮಕಾತಿ ಕೋಟಾದಲ್ಲಿ ಖಾಲಿಯಿರುವ ಅಡುಗೆಯವರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಇಲಾಖಾ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 824 ವಸತಿ ಶಾಲೆ/ಕಾಲೇಜುಗಳಲ್ಲಿ ಮಂಜೂರಾದ ಬೋಧಕ ಹುದ್ದೆಗಳ ಸಂಖ್ಯೆ 8823, ಖಾಲಿ ಇರುವ ಬೋಧಕರ ಹುದ್ದೆಗಳು 4406 (ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಹುದ್ದೆಗಳ ಸಂಖ್ಯೆ 1644).<br><br>ಬೋಧಕೇತರ ಸಿಬ್ಬಂದಿಗಳು (ಪ್ರ.ದ.ಸ., ಸ್ಟಾಫ್ ನರ್ಸ್, ನಿಲಯಪಾಲಕರು) ಮಂಜೂರಾದ ಹುದ್ದೆಗಳ ಸಂಖ್ಯೆ 2498, ಖಾಲಿ ಇರುವ ಬೋಧಕೇತರ ಹುದ್ದೆಗಳು 2035 (ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಹುದ್ದೆಗಳ ಸಂಖ್ಯೆ 1245).<br><br>ಗ್ರೂಪ್-ಡಿ ಹುದ್ದೆಗಳ ಸಂಖ್ಯೆ 7119 (ಹುದ್ದೆಗಳ ಸರ್ಕಾರದ ಮಂಜೂರಾತಿ ಆದೇಶದ ಷರತ್ತಿನಂತೆ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ.<br><br>ಖಾಲಿ ಇರುವ ಬೋಧಕ / ಬೋಧಕೇತರ ಸಿಬ್ಬಂದಿಗಳಿಗೆ ಹೊರಸಂಪನ್ಮೂಲದ ಶಿಕ್ಷಕರು ಹಾಗೂ ಅತಿಥಿ ಶಿಕ್ಷಕರುಗಳು ಮತ್ತು ಹೊರಸಂಪನ್ಮೂಲದ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಕರ್ನಾಟಕ ಲೋಕಸೇವಾ ಆಯೋಗಕ್ಕೆ ವಸತಿ ಶಾಲೆಗಳಲ್ಲಿ ಖಾಲಿಯಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಭರ್ತಿ ಮಾಡಲು ವಹಿಸಲಾಗಿದ್ದು, ಸದರಿ ಆಯೋಗವು ನೀಡಿರುವ ಅರ್ಹ ಅಭ್ಯರ್ಥಿಗಳ ಪಟ್ಟಿ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲಾಗುತ್ತಿದೆ. |

ಸಕಇ 113 ಮೊದೇಶಾ 2020

**(ಗೋವಿಂದ ಎಂ. ಕಾರಜೋಳ)**
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು